# ಕನ್ನಡ ಪೋಸ್ಟ್

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

KANNADA POST

ಕನ್ನಡ ದಿನ ಪತ್ರಿಕೆ Kannada Daily

ಹಾಸನ E-mail : kannadapostnews@gmail.com / ಕನ್ನಡ post Price: ₹1

Vol.No.01 | Issue. 222 | Pages. 2 | Date: 15-07-2025, TUESDAY RNI NO: KARKAN/2024/89601

ಸಂಪುಟ : 01 - ಸಂಚಿಕೆ : 222 - ಪುಟಗಳು : 2 - 15 ಜುಲೈ 2025 ಮಂಗಳವಾರ Ph: 8762954248 ದರ : ₹1


# ತಪ್ಪದೇ ಬೆಳೆ ವಿಮೆ ಕಟ್ಟಿಸಲು ಕ್ರಮ ವಹಿಸಿ

## ಜಿಲ್ಲಾ ಉಸ್ತುವಾರಿ ಸಚಿವ ರಾಜಣ್ಣ ಸೂಚನೆ | ಕೆಡಿಪಿ ಪ್ರಗತಿ ಪರಿಶೀಲನಾ ಸಭೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ರೈತರಿಗೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಬೆಳೆ ನಷ್ಟಕ್ಕೆ ಪರಿಹಾರ ಪಡೆಯಲು ಸಹಕಾರಿ ಆಗುವಂತೆ ರೈತರಿಗೆ ಮನವರಿಕೆ ಮಾಡಿ ಕಡ್ಡಾಯವಾಗಿ ವಿಮೆ ಕಟ್ಟಿಸಲು ಕ್ರಮ ವಹಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಎನ್. ರಾಜಣ್ಣ ಸೂಚನೆ ನೀಡಿದರು.

ಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಿದ್ದ 2025-26ನೇ ಸಾಲಿನ ಮೊದಲನೇ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗ್ರಾಮೀಣ ಪ್ರದೇಶದಲ್ಲಿ ಜನರಿಗೆ ಅರಿವು ಮೂಡಿಸಿ ಪ್ರಾಥಮಿಕವಾಗಿ ಮಣ್ಣಿನ ಗುಣಮಟ್ಟ ಸಂರಕ್ಷಣೆಗಾಗಿ ಪರೀಕ್ಷೆ ಮಾಡಿಸುವುದರ ಜೊತೆಗೆ ಮುಂದೆ ರೋಗ ರುಜಿನಗಳು ಹೆಚ್ಚಾಗದಂತೆ ತಡೆಯಲು ಮಣ್ಣಿನ ಫಲವತ್ತತೆ ಹೆಚ್ಚಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದರು.

ರೈತರಿಗೆ ಮಾಹಿತಿ ನೀಡುವ ನಿಟ್ಟಿನಲ್ಲಿ ಪ್ರತಿ ತಾಲ್ಲೂಕಿನಲ್ಲಿ ಸ್ಥಳೀಯ ಜನಪ್ರತಿನಿಧಿಗಳನ್ನು ಆಹ್ವಾನಿಸಿ ಕ್ಷೇತ್ರೋತ್ಸವವನ್ನುನಡೆಸಬೇಕು. ಅದರಿಂದ ರೈತರು ಲಾಭದಾಯಕ ಬೆಳೆಗಳನ್ನು ಬೆಳೆಯಲು ಸಹಕಾರಿಯಾಗುತ್ತದೆ ಎಂದು ತಿಳಿಸಿದರು.

### ಶಾಶ್ವತ ಪರಿಹಾರಕ್ಕೆ ಬದ್ಧ

ತೆಂಗು ಬೆಳೆಗೆ ತಗುಲುವ ರೋಗಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಪರಿಣಿತ ತಜ್ಞರ ತಂಡದಿಂದ ವರದಿ ಪಡೆದು ಪರಿಹಾರ ಕಂಡುಕೊಳ್ಳಲು ಸರ್ಕಾರದ ಮಟ್ಟದಲ್ಲಿ ಚರ್ಚಿಸಿ ನಿರ್ಧಾರ ತೆಗೆದುಕೊಳ್ಳಲು ಕೃಷಿ ಮತ್ತು ತೋಟಗಾರಿಕೆ ಸಚಿವರೊಂದಿಗೆ ಮಾತುಕತೆ ನಡೆಸಲಾಗುವುದುಎಂದು ತಿಳಿಸಿದರು.

### ಶುದ್ಧ ಕುಡಿಯುವ ನೀರು ಕಲ್ಪಿಸಿ

ಜಿಲ್ಲೆಯಲ್ಲಿ ಕುಡಿಯುವ ನೀರಿನ ಮಾದರಿಗಳನ್ನು ಸಂಗ್ರಹಿಸಿ ಪರಿಶೀಲಿಸಿ ಯೋಗ್ಯವಲ್ಲದವುಗಳ ಬಗ್ಗೆ ಗಮನ ಹರಿಸಬೇಕು. ರುಚಿಗಾಗಿ ಹಾನಿಕಾರಕ ವಸ್ತುಗಳನ್ನು ಬಳಸಿ ತಯಾರಿಸುವ ಖಾದ್ಯಗಳ ಸೇವನೆಯಿಂದ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತದೆ. ಅದನ್ನುಗಂಭೀರವಾಗಿ ಪರಿಗಣಿಸಿ ಕ್ರಮ ವಹಿಸಬೇಕು ಎಂದು ಆಹಾರ ಸುರಕ್ಷತಾ ಅಧಿಕಾರಿಗಳಿಗೆ ಸೂಚಿಸಿದರು.

### ಹೃದಯಾಘಾತ ಆತಂಕ ಹೋಗಲಾಡಿಸಿ

ಮಾಧ್ಯಮಗಳಲ್ಲಿ ವರದಿಯಾಗಿರುವ ಹೃದಯಾಘಾತದಿಂದ ಸಾವಾಗಿರುವ ಬಗ್ಗೆ ಜನರಲ್ಲಿ ಆತಂಕ ಮೂಡಿಸುತ್ತದೆ. ಈ ನಿಟ್ಟಿನಲ್ಲಿ ಆರೋಗ್ಯ ಇಲಾಖೆ ಅಧಿಕಾರಿಗಳು ರೇಡಿಯೋ ಮೂಲಕ ಫೋನ್ ಇನ್ ಕಾರ್ಯಕ್ರಮ ಮಾಡಿ ಜನರ ಪ್ರಶ್ನೆಗಳಿಗೆ ಉತ್ತರಿಸಿ ಆತಂಕ ದೂರ ಮಾಡುವಂತೆ ತಿಳಿಸಿದರಲ್ಲದೆ, ಸ್ಥಳೀಯ ವಾಹಿನಿಗಳ ಮೂಲಕವು ಅರಿವು ಮೂಡಿಸಲು ಕ್ರಮವಹಿಸುವಂತೆ ತಿಳಿಸಿದರು.

ಈಗಾಗಲೇ ಜಿಲ್ಲೆಯಲ್ಲಿ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಆರೋಗ್ಯ ತಪಾಸಣೆ ಮಾಡಲಾಗುತ್ತಿದೆ. ಇದನ್ನುರಾಜ್ಯ ವ್ಯಾಪ್ತಿಯಲ್ಲಿ ನಡೆಸಲು ಚಿಂತನೆ ನಡೆದಿದೆ ಎಂದರಲ್ಲದೆ, ಹಾಸನ ಜಿಲ್ಲೆಯಲ್ಲಿ ಸಾರ್ವಜನಿಕರ ಹೃದಯ ತಪಾಸಣೆಗಾಗಿ ಮೆಗಾ ಕ್ಯಾಂಪ್ಏರ್ಪಡಿಸಲಾಗುವುದು ಎಂದು ತಿಳಿಸಿದರು.




> ಹೃದಯಾಘಾತ ಪ್ರಕರಣಗಳನ್ನು ಆರೋಗ್ಯ ಇಲಾಖೆ ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಬೇಕು. ಪದವಿ ವಿದ್ಯಾರ್ಥಿಗಳಿಗೂ ಹೃದಯ ತಪಾಸಣೆ ಮಾಡಿ ವರದಿ ಸಲ್ಲಿಸಬೇಕು. ಸಾರ್ವಜನಿಕರಲ್ಲಿ ಆತಂಕ ನಿವಾರಣೆ ಮಾಡಬೇಕು.
>
> **- ಕೆ.ಎನ್. ರಾಜಣ್ಣ, ಜಿಲ್ಲಾ ಉಸ್ತುವಾರಿ ಸಚಿವ**

ಜೆಜೆಎಂಯೋಜನೆಯಡಿ ಮೂಲಭೂತವಾಗಿ ವಾಟರ್ಟ್ಯಾಂಕ್ ನಿರ್ಮಾಣ ಮಾಡಿರುವ ಬಗ್ಗೆ ಖಾತರಿ ಪಡಿಸಿಕೊಂಡು ನಂತರಬಿಲ್ ಪಾವತಿಸಿ, ಕೇವಲ ಪೈಪ್ ಲೈನ್ ಮಾಡಿರುವುದಕ್ಕೆ ಹಣ ಪಾವತಿ ಮಾಡಬೇಡಿ ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಫಲಿತಾಂಶವನ್ನುಉನ್ನತ ಸ್ಥಾನಕ್ಕೆ ತರಲು ಹತ್ತನೇ ತರಗತಿಯ ಹಂತದಲ್ಲಿ ಮಕ್ಕಳಿಗೆ ಒತ್ತಡ ಹಾಕುವ ಬದಲಾಗಿ 8ನೇ ತರಗತಿಯಿಂದಲೇ ಕಲಿಕೆಗೆ ಹೆಚ್ಚಿನ ಒತ್ತು ನೀಡಿ ಮಕ್ಕಳನ್ನು ಪರೀಕ್ಷೆಗೆ ಅಣಿಗೊಳಿಸಿ ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿಶಿಥಿಲವಾಗಿರುವ ಶಾಲಾ ಕಟ್ಟಡಗಳ ದುರಸ್ತಿಗೆ ಕ್ರಮ ಕೈಗೊಳ್ಳುವಂತೆ ಸೂಚಿಸಿದರಲ್ಲದೆ, ಹೆಣ್ಣು ಮತ್ತುಗಂಡು ಮಕ್ಕಳಿಗೆ ಪ್ರತ್ಯೇಕ ಶೌಚಾಲಯವಿರುವಂತೆ ನೋಡಿಕೊಳ್ಳಿ ಎಂದು ತಿಳಿಸಿದರು.

ಯಾವುದೇ ಮಗುವೂ ವಿದ್ಯಾರ್ಥಿ ವೇತನದಿಂದ ವಂಚಿತರಾಗದಂತೆ ಅಧಿಕಾರಿಗಳು ನಿಗಾವಹಿಸಿ ಅರ್ಹ ಮಕ್ಕಳಿಗೆ ಸೌಲಭ್ಯಕಲ್ಪಿಸಲು ಕ್ರಮಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

### ಗ್ಯಾರಂಟಿ ಎಲ್ಲರಿಗೂ ತಲುಪಲಿ

ಜಿಲ್ಲೆಯಲ್ಲಿ ಗ್ಯಾರಂಟಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಅಧಿಕಾರಿಗಳು ನಿಗಾ ವಹಿಸಬೇಕು. ಅಧಿಕಾರಿಗಳು ಸಾರ್ವಜನಿಕರಿಗೆ ಸಕಾರಾತ್ಮಕವಾಗಿ ಸ್ಪಂದಿಸಿ ತಮ್ಮಕಚೇರಿಗೆ ಸಲ್ಲಿಕೆಯಾಗುವ ಅರ್ಜಿಗಳನ್ನು ನಿಗದಿತ ದಿನಗಳೊಳಗೆ ವಿಲೇವಾರಿ ಮಾಡಲು ಎಚ್ಚರ ವಹಿಸಲು ತಿಳಿಸಿದರು.

### ತೆಂಗು ಸಂರಕ್ಷಣೆಗೆ 100 ಕೋಟಿ ರೂ. ನೀಡಿ

ಶಾಸಕ ಸಿ.ಎನ್. ಬಾಲಕೃಷ್ಣ ಮಾತನಾಡಿ, ಜಿಲ್ಲೆಯ ಪ್ರಮುಖ ಬೆಳೆಯಾದ ತೆಂಗಿಗೆ ಕಪ್ಪುತಲೆ ಹುಳು, ಕಾಂಡ ಸೋರುವುದು, ಸುಳಿ ರೋಗ ಹಾಗೂ ಗರಿ ರೋಗಗಳು ಕಂಡುಬರುತ್ತಿದ್ದು, ತೆಂಗು ಸಂರಕ್ಷಣೆ ಮಾಡಿಕೊಳ್ಳುವ ನಿಟ್ಟಿನಲ್ಲಿ ಸರ್ಕಾರ ನೂರು ಕೋಟಿ ರೂ. ಮೀಸಲಿಡಲು ಸಚಿವರಲ್ಲಿ ಮನವಿ ಮಾಡಿದರು.

ವಿಧಾನ ಪರಿಷತ್ ಸದಸ್ಯ ವಿವೇಕಾನಂದ ಮಾತನಾಡಿ, ಸರ್ಕಾರಿ ಶಾಲೆಗಳಿಗೆ ಹಣ್ಣಿನ ಗಿಡಗಳು ಹಾಗೂ ಅಲಂಕಾರಿಕ ಗಿಡಗಳನ್ನು ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.




ತಹಸೀಲ್ದಾರ್ಗಳು ಜನ ಸಂಪರ್ಕ ಸಭೆ ನಡೆಸಿ ಸ್ಥಳದಲ್ಲಿ ಅರ್ಜಿ ಸ್ವೀಕರಿಸಿ ಅರ್ಹರು ಯಾವುದೇ ಯೋಜನೆಯ ಸೌಲಭ್ಯದಿಂದ ದೂರ ಉಳಿಯದಂತೆ ನೋಡಿಕೊಳ್ಳಿ ಎಂದರಲ್ಲದೆ, ಪೌತಿ ಖಾತೆ, ಪೋಡಿ ಮತ್ತಿತರ ಕರ್ತವ್ಯಗಳನ್ನು ಎಚ್ಚರಿಕೆಯಿಂದ ನಿರ್ವಹಿಸಿ ಎಂದು ಸೂಚಿಸಿದರು.

ಅರ್ಹರು ಪಿಂಚಣಿಯಿಂದ ವಂಚಿತರಾಗದಂತೆ ಗ್ರಾಮ ಸಹಾಯಕರು ಮನೆ ಮನೆಗೆ ಭೇಟಿ ನೀಡಿ ಪರಿಶೀಲನೆ ಮಾಡಿ ಅರ್ಜಿ ಪಡೆದು ಸವಲತ್ತು ಒದಗಿಸಲು ಕ್ರಮ ವಹಿಸುವಂತೆ ತಿಳಿಸಿದರು.

ಗಂಗಾ ಕಲ್ಯಾಣ ಯೋಜನೆಯಡಿ ಕೊರೆದಿರುವ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ನಗರ ಪ್ರದೇಶದಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಿ ಎಂದ ಸಚಿವರು, ಸಾರ್ವಜನಿಕರ ಸುಗಮ ಸಂಚಾರಕ್ಕೆ ರಸ್ತೆಗಳ ಗುಂಡಿ ಮುಚ್ಚುವ ಕಾರ್ಯವನ್ನು ಮಾಡಿಸಿ ರಸ್ತೆಗಳು ಒತ್ತುವರಿಆಗಿದ್ದಲ್ಲಿ ತೆರವುಗೊಳಿಸಲು ಕ್ರಮವಹಿಸುವಂತೆ ಸೂಚಿಸಿದರು.

ಮಹಾನಗರ ಪಾಲಿಕೆಗೆ ಹೊಸದಾಗಿ ಸೇರ್ಪಡೆ ಆಗಿರುವ ಗ್ರಾಮೀಣ ಪ್ರದೇಶಗಳಿಗೆ ಮೂಲಸೌಕರ್ಯ ಕಲ್ಪಿಸಲು ನಿಗಾ ವಹಿಸಬೇಕು. ಇ- ಖಾತೆಗೆ ಬರುವ ಸಾರ್ವಜನಿಕರಿಗೆ ಮಾರ್ಗದರ್ಶನ ನೀಡಿ ಜೊತೆಗೆ ಸಕಾರಾತ್ಮಕವಾಗಿ ಸ್ಪಂದಿಸಿ ಕೆಲಸ ಮಾಡುವಂತೆ ಸೂಚಿಸಿದರು.

### ಕೆಪಿಎಸ್ ಹೆಚ್ಚಿಸಲು ಸಲಹೆ

ಶಾಸಕ ಕೆ.ಎಂ. ಶಿವಲಿಂಗೇಗೌಡ ಮಾತನಾಡಿ, ಕಡ್ಡಾಯವಾಗಿ ರೈತರಿಂದ



ಬೆಳೆ ವಿಮೆ ಕಟ್ಟಿಸಲು ಕ್ರಮವಹಿಸಿ ಬೆಳೆ ನಷ್ಟವಾದಲ್ಲಿ ಪರಿಹಾರ ಪಡೆಯಲು ಸಹಕಾರಿ ಆಗುತ್ತದೆ ಎಂದರು.

ಜಿಲ್ಲೆಯಲ್ಲಿ 467 ಶಾಲೆಗಳಲ್ಲಿ 10ಕ್ಕಿಂತ ಕಡಿಮೆ ಮಕ್ಕಳಿದ್ದಾರೆ. ಈ ಶಾಲೆಗಳಲ್ಲಿ ಮೂರು ಶಿಕ್ಷಕರು ಕರ್ತವ್ಯ ನಿರ್ವಹಿಸುತ್ತಿದ್ದಾರೆ ಎಂದ ಅವರು, ತಮ್ಮ ಮಕ್ಕಳು ಇಂಗ್ಲೀಷ್□ ಮಾಧ್ಯಮದಲ್ಲಿ ಕಲಿಯಲಿ ಎಂದು ಪೋಷಕರು ಮಕ್ಕಳನ್ನು ಖಾಸಗಿ ಶಾಲೆಗಳಿಗೆ ದಾಖಲು ಮಾಡುತ್ತಿದ್ದಾರೆ. ಈ ನಿಟ್ಟಿನಲ್ಲಿ ಸರ್ಕಾರದ ಮಟ್ಟದಲ್ಲಿ ಚರ್ಚಿಸಿ ಕಡಿಮೆ ಮಕ್ಕಳ ಸಂಖ್ಯೆ ಇರುವ ಶಾಲೆಗಳನ್ನು ಒಟ್ಟಿಗೆ ಸೇರ್ಪಡೆ ಮಾಡಿ ಕೆ.ಪಿ.ಎಸ್.ಶಾಲೆಗಳನ್ನು ಪ್ರಾರಂಭಿಸಿದರೆ ಉತ್ತಮವಾಗುತ್ತದೆ ಎಂದರು.

ತಿಂಡಿ ತಿನಿಸುಗಳಿಗೆ ಹಾನಿಕಾರಕ ಬಣ್ಣ ಬಳಸಿ ತಯಾರಿಸುವುದರಿಂದ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಇಂತಹ ಆಹಾರ ಪದಾರ್ಥಗಳನ್ನು ಸಾರ್ವಜನಿಕರಿಗೆ ವಿತರಿಸಿದಂತೆ ತಡೆಯಲು ನಿಗಾವಹಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಸಂಸದ ಶ್ರೇಯಸ್ ಪಟೇಲ್ ಮಾತನಾಡಿ, ಹೃದಯಾಘಾತದಿಂದ ಸಾವನ್ನಪ್ಪಿದ ಪ್ರಕರಣಗಳ ಬಗ್ಗೆ ಕೂಲಂಕುಷವಾಗಿ ಪರಿಶೀಲಿಸಿ ನಿಖರವಾದ ನಂತರ ಪ್ರಕಟಿಸುವಂತೆ ವೈದ್ಯರಿಗೆ ತಿಳಿಸಿದರು.

ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ನವೀನ್ರಾಜ್ ಸಿಂಗ್, ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತಾ, ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಬಿ.ಆರ್. ಪೂರ್ಣಿಮಾ, ಉಪ ಅರಣ್ಯ ಸಂರಕ್ಷಣಾಧಿಕಾರಿ ಸೌರಬ್ಕುಮಾರ್, ನಾಮ ನಿರ್ದೇಶಿತ ಸದಸ್ಯರಾದ ಎಂ.ಎ.ಗೋಪಾಲಸ್ವಾಮಿ, ಸೌಮ್ಯ, ಸುಲೋಚನಾ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು. ಯುವನಿಧಿ ನೋಂದಣಿ ಕುರಿತಂತೆ ಪೋಸ್ಟರ್ ಬಿಡುಗಡೆ ಮಾಡಲಾಯಿತು.

# ಕೇಂದ್ರದ ದುರುದ್ದೇಶವಿದ್ದರೆ ಖಂಡನೀಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಶಿವಮೊಗ್ಗದ ಸಿಗಂದೂರು ಸೇತುವೆ ಉದ್ಘಾಟನೆಗೆ ಕೇಂದ್ರ ಸರ್ಕಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಉದ್ದೇಶಪೂರ್ವಕವಾಗಿ ಆಹ್ವಾನಿಸದಿದ್ದರೆ ಅದು ಖಂಡನೀಯ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಎನ್. ರಾಜಣ್ಣ ಹೇಳಿದರು.



ಸುದ್ದಿಗಾರರೊಂದಿಗೆ ಸೋಮವಾರ ಮಾತನಾಡಿ, ನಮ್ಮ ದೇಶದಲ್ಲಿ ಸಂವಿಧಾನಬದ್ಧ ಆಡಳಿತವಿದೆ. ನಮ್ಮ ಇತಿಮಿತಿಯಲ್ಲಿ ಕೆಲಸ ಮಾಡಬೇಕು. ಮಾಹಿತಿ ಕೊರತೆಯಿಂದ ಕೆಲವೊಮ್ಮೆ ಮುಖ್ಯಮಂತ್ರಿ ಹೋಗದೆ ಇರಬಹುದು. ವಿಜಯಪುರ ಜಿಲ್ಲೆಯ ಇಂಡಿ ತಾಲ್ಲೂಕಿನಲ್ಲಿ 2000 ಕೋಟಿ ಕಾಮಗಾರಿಗಳಿಗೆ ಅಡಿಗಲ್ಲು ಸಮಾರಂಭದಲ್ಲಿ ಮುಖ್ಯಮಂತ್ರಿ ಭಾಗಿಯಾಗಿದ್ದಾರೆ. ಪೂರ್ವನಿಗದಿತ ಕಾರ್ಯಕ್ರಮವಾದ್ದರಿಂದ ಸಿಗಂದೂರು ಸಮಾರಂಭ ಮುಂದೂಡುವಂತೆ ಸಿಎಂ ಕೇಂದ್ರ ಸಚಿವ ಗಡ್ಕರಿ ಅವರಿಗೆ ಪತ್ರ ಬರೆದಿದ್ದರು. ಆದರೂ ಅವರು ಕಾರ್ಯಕ್ರಮ ಮಾಡಿದ್ದಾರೆ ಎಂದರು.

ಹೆಚ್ಚು ಒತ್ತು ಕೊಟ್ಟು ಚರ್ಚೆ ಮಾಡುವುದು ಬೇಡ, ಗಡ್ಕರಿ ಅವರ ಬಗ್ಗೆ ನನಗೆ ವೈಯಕ್ತಿಕವಾಗಿ ವಿಶೇಷವಾದ ಅಭಿಮಾನ ಇದೆ. ದೇಶಗಳಲ್ಲಿ ಉತ್ತಮ ರಸ್ತೆ ಆಗುತ್ತಿವೆ. ಅವರು ಯಾವುದೇ ಪಕ್ಷ, ಯಾವುದೇ ರಾಜ್ಯ ಎಂದು ತಾರತಮ್ಯ ಮಾಡುವ ವ್ಯಕ್ತಿಯಲ್ಲ,

ಇವರು ಪೂನಾದವರು, ಆರ್ ಎಸ್ಎಸ್ನಿಂದ ಬಂದವರು ಕಟ್ಟರ್ ಹಿಂದೂವಾದಿ ಅನ್ಕೊಂಡಿದ್ದೆ, ಅವರ ಇಂಟರ್ವ್ಯೂ ನೋಡಿದ ಮೇಲೆ, ಕಾರ್ಯವೈಖರಿ ನೋಡಿದ ಮೇಲೆ, ನಿಜಕ್ಕೂ ಕೂಡ ಅಭಿವೃದ್ಧಿ ಪರ ಇದ್ದಾರೆ ಅಂಥ ನನಗೆ ಅನ್ನಿಸುತ್ತೆ. ರಾಷ್ಟ್ರದಲ್ಲಿ ರಸ್ತೆ ಅಭಿವೃದ್ಧಿ ಮಾಡುವುದನ್ನು ನೋಡಿದರೆ ನಿಜಕ್ಕೂ ಅವರು ಅಭಿವೃದ್ಧಿ ಪರ ಇರುವ ರಾಜಕಾರಣಿ ಎಂದರು.

ನಮ್ಮಲ್ಲಿ ಯಾವುದೇ ಗೊಂದಲ ಇರುವುದು ಬಿಜೆಪಿಯಲ್ಲಿ, ಅವರ ಗೊಂದಲ ಸರಿಪಡಿಸಿಕೊಳ್ಳಲಿ ಎಂದು ಕುಟುಕಿದರು.

ಕಾಂಗ್ರೆಸ್ ಶಾಸಕರ ಲಿಸ್ಟ್ ರೆಡಿ ಇದೆ ಎಂಬ ವಿಚಾರಕ್ಕೆ, ಯಾರು ಹೇಳಿರೋರು, ಯಾರೇ ಹೇಳಿ ಕರ್ಕೊಂಡು ಹೋಗಿ ಮೆಂಟಲ್ ಆಸ್ಪತ್ರೆಗೆ ಸೇರಿಸಿ, ಕಾಂಗ್ರೆಸ್ ಪಕ್ಷದಲ್ಲಿ ಯಾವುದೇ ಗೊಂದಲವಿಲ್ಲ, ಯಾವುದೇ ಪಟ್ಟಿ ಇಲ್ಲ, ಬಿಜೆಪಿ-ಜೆಡಿಎಸ್ ನಿಂದ ಕಾಂಗ್ರೆಸ್ಗೆ ಬರುವವರ ಲಿಸ್ಟ್ ಎಂ.ಬಿ.ಪಾಟೀಲ್ಗೆ ಕೊಟ್ಟವ್ರೆ, ಅದನ್ನು ಕೊಡ್ಲಾ ಎಂದ ಸಚಿವರು, ಈಗಲೇ ಕೊಡಲ್ಲ, ಸೇರಿದ ಮೇಲೆ ಹೇಳ್ತೀನಿ ಎಂದರು.

ಸೆಪ್ಟೆಂಬರ್ ಕ್ರಾಂತಿ ವಿಚಾರವಾಗಿ ಕೇಳಿದ ಪ್ರಶ್ನೆಗೆ ಆ ಬಗ್ಗೆ ಈಗಲೇ ಹೇಳಲ್ಲ. ಮುಖ್ಯಮಂತ್ರಿಗಳಿಗೆ 5 ವರ್ಷ ನಾನೇ ಸಿಎಂ ಅಂಥ ಗೊತ್ತಿತ್ತಲ್ಲ, ಮೊದಲೇ ಯಾಕೆ ಹೇಳಲಿಲ್ಲ, ನಾನೂ ಅವರನ್ನು ಪ್ರಶ್ನೆ ಮಾಡಿದೆ, ಯಾವುದನ್ನ ಯಾವಾಗ ಹೇಳಬೇಕೋ ಆಗಲೇ ಹೇಳಬೇಕು, ಅದನ್ನೀಗ ಹೇಳಿದ್ದಾರೆ. ನಾನೂ ಹಾಗೆ, ಸೆಪ್ಟೆಂಬರ್ ಕ್ರಾಂತಿ ಬಗ್ಗೆ ಆಗಲೇ ಹೇಳ್ತೀನಿ ಎಂದು ಪ್ರತಿಕ್ರಿಯಿಸಿದರು.

# ಹಲ್ಮಿಡಿ ರಸ್ತೆ ಕಾಮಗಾರಿಯಲ್ಲಿ ವ್ಯಾಪಕ ಭ್ರಷ್ಟಾಚಾರ: ಆರೋಪ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ತಾಲ್ಲೂಕಿನ ಹಲ್ಮಿಡಿ ಗ್ರಾಮದಲ್ಲಿ 6 ಕೋಟಿ ರೂ. ವೆಚ್ಚದಲ್ಲಿ ನಡೆಸಲಾಗಿರುವ ರಸ್ತೆ ಕಾಮಗಾರಿ ಸಂಪೂರ್ಣ ಕಳಪೆಯಾಗಿದ್ದು ಸಂಬಂಧಪಟ್ಟ ಅಧಿಕಾರಿ ಹಾಗೂ ಗುತ್ತಿಗೆದಾರರ ವಿರುದ್ಧ ಕ್ರಮ ಜರುಗಿಸಬೇಕು ಎಂದು ಕೆಡಿಪಿ ಸದಸ್ಯ ನವೀನ್ ಅವರು ಒತ್ತಾಯಿಸಿದರು.




ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿ, ಕನ್ನಡಕ್ಕೆ ಶಾಸ್ತ್ರೀಯ ಸ್ಥಾನಮಾನ ದೊರಕಿಸಿಕೊಟ್ಟ ಹಲ್ಮಿಡಿ ಗ್ರಾಮಕ್ಕೆ ಚನ್ನಾಪುರದ ಗಡಿಯಿಂದ ಮೂರು ತಿಂಗಳ ಹಿಂದೆ ರಸ್ತೆ ಕಾಮಗಾರಿ ಕೈಗೊಳ್ಳಲಾಗಿತ್ತು. ಮಾದರಿ ಕಾಮಗಾರಿ ಮಾಡುವುದಾಗಿ ಶಾಸಕ ಹೆಚ್.ಕೆ. ಸುರೇಶ್ ಭೂಮಿಪೂಜೆ ವೇಳೆ ಭರವಸೆ ನೀಡಿದ್ದರು. ಆದರೆ ನಿರ್ಮಾಣವಾದ ಕೆಲವೇ ದಿನಗಳಲ್ಲಿ ರಸ್ತೆಪೂರ್ತಿ ಗುಂಡಿಮಯವಾಗಿದೆ. ರಸ್ತೆಯ ಇಕ್ಕೆಲಗಳಲ್ಲಿ ಸಮತಟ್ಟು ಮಾಡಲು ಅಂಟು ಮಣ್ಣು ಹಾಕಿರುವುದರಿಂದ ಮಳೆಯಿಂದ ಕೆಸರು ಗದ್ದೆಯಾಗಿ ಮಾರ್ಪಟ್ಟಿದೆ.

ವಾಹನಗಳು ಕೆಸರಿಗೆ ಸಿಲುಕಿ ಪರದಾಡುವಂತಾಗಿದೆ. ಕಳಪೆ ಕಾಮಗಾರಿಗೆ ಕಾರಣರಾದ ಗುತ್ತಿಗೆದಾರ ಹಾಗೂ ಲೋಕೋಪಯೋಗಿ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಬೇಕೆಂದು ಒತ್ತಾಯಿಸಿದರು.

ಶಾಸಕ ಹೆಚ್.ಕೆ. ಸುರೇಶ್ ಅವರು ಕೇವಲ ಭಾಷಣಕ್ಕೆ ಸೀಮಿತರಾಗಿದ್ದಾರೆ. ಮೂರು ತಿಂಗಳ ಹಿಂದೆ ಭೂಮಿಪೂಜೆಗೆ ಬಂದಿದ್ದ ಅವರು ನಂತರ ಕಾಮಗಾರಿ ಪರಿಶೀಲನೆಗೆ ಒಂದು ಬಾರಿಯೂ ಬರಲಿಲ್ಲ. ಎಂಟು ಕಿ.ಮೀ. ರಸ್ತೆ ಸಂಪೂರ್ಣ ಕಳಪೆಯಾಗಿದೆ. ಕಾಮಗಾರಿಯಲ್ಲಿ ವ್ಯಾಪಕ ಭ್ರಷ್ಟಾಚಾರ ನಡೆದಿರುವ ಸಂಶಯ ಕಾಡುತ್ತಿದೆ. ಈ ಹಿಂದೆ ಇದ್ದ ಪಿಡಬ್ಲ್ಯೂಡಿ ಎಂಜಿನಿಯರ್ ವರ್ಗಾವಣೆಯಾಗಿದ್ದು ಈಗಿರುವ ಎಂಜಿನಿಯರ್ ಅವರನ್ನು ಅಂದಾಜು ಪಟ್ಟಿ ಕೊಡಿ ಎಂದು ಕೇಳಿದರೆ ನನಗೂ ಇದಕ್ಕೂ ಸಂಬಂಧವಿಲ್ಲ , ಪ್ರಿಂಟರ್ ಕೆಟ್ಟುಹೋಗಿದೆ ಎಂದು ಉಡಾಫೆ ಉತ್ತರ ನೀಡುತ್ತಾರೆ ಎಂದರು.

ಒಂದು ವಾರದಲ್ಲಿ ರಸ್ತೆಯನ್ನು ಅಗೆದು ಮತ್ತೆ ಮರು ಡಾಂಬರೀಕರಣ ಮಾಡಬೇಕು. ಪಿಡಬ್ಲ್ಯೂಡಿ ಎಂಜಿನಿಯರ್‌ನನ್ನು ಅಮಾನತು ಮಾಡಬೇಕು. ಗುತ್ತಿಗೆದಾರರನ್ನು ಕಪ್ಪು ಪಟ್ಟಿಗೆ ಸೇರಿಸಬೇಕು. ಇಲ್ಲವಾದರೆ ನಾರಾಯಣಪುರ ಗ್ರಾ.ಪಂ. ವ್ಯಾಪ್ತಿಯ 17 ಗ್ರಾಮಗಳ ಗ್ರಾಮಸ್ಥರು ಗುಂಡಿ ಬಿದ್ದ ರಸ್ತೆಯಲ್ಲಿ ಗಿಡಗಳನ್ನು ನೆಟ್ಟು ಪ್ರತಿಭಟನೆ ನಡೆಸಬೇಕಾಗುತ್ತದೆಂದು ಎಚ್ಚರಿಕೆ ನೀಡಿದರು.

ಗ್ರಾಮದ ಧರ್ಮೇಶ, ಶಿವಕುಮಾರ್, ದೇವರಾಜು, ದಿನೇಶ್, ಗುರುಮೂರ್ತಿ ಇದ್ದರು.

# ಶಕ್ತಿ ಯೋಜನೆಯಿಂದ ಮಹಿಳೆಯರಿಗೆ ಅನುಕೂಲ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**


ಸಕಲೇಶಪುರ: ಶಕ್ತಿ ಯೋಜನೆ ಎರಡು ವರ್ಷ ಪೂರೈಸಿದ್ದು ರಾಜ್ಯದ ಮಹಿಳೆಯರಿಗೆ ಅನುಕೂಲ ಮಾಡಿಕೊಟ್ಟಿದೆ ಎಂದು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ತಾಲ್ಲೂಕು ಅಧ್ಯಕ್ಷ ಮುರಳಿ ಮೋಹನ್ ಹೇಳಿದರು.

ಪಟ್ಟಣದ ಹೊಸ ಬಸ್ ನಿಲ್ದಾಣದಲ್ಲಿ ಕೆಎಸ್ಆರ್ ಟಿಸಿ ಬಸ್‌ಗೆ ಪೂಜೆ ಸಲ್ಲಿಸಿ ಮಾತನಾಡಿ, 2023ರಲ್ಲಿ ಅಧಿಕಾರಕ್ಕೆ ಬಂದ ಕೂಡಲೇ ಕಾಂಗ್ರೆಸ್ ಸರ್ಕಾರವು ಚುನಾವಣೆ ಪೂರ್ವದಲ್ಲಿ ಘೋಷಿಸಿದ್ದ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದೆ. ಆ ಪೈಕಿ ಶಕ್ತಿ ಯೋಜನೆಯು ಪ್ರಮುಖವಾಗಿದ್ದು, ಸರ್ಕಾರ ಅಧಿಕಾರಕ್ಕೆ ಬಂದ ಒಂದೂವರೆ ತಿಂಗಳಲ್ಲಿ ಈ ಯೋಜನೆಗೆ



ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದ್ದರು ಎಂದು ತಿಳಿಸಿದರು. ಸಕಲೇಶಪುರ ಘಟಕದಲ್ಲಿಯೇ ಸುಮಾರು 1.28 ಕೋಟಿ ಮಹಿಳಾ ಪ್ರಯಾಣಿಕರು ಶಕ್ತಿ ಯೋಜನೆಯ ಉಚಿತ ಬಸ್ ಪ್ರಯಾಣ ಸೌಲಭ್ಯವನ್ನು ಸದುಪಯೋಗಪಡಿಸಿಕೊಂಡಿದ್ದಾರೆ. ರಾಜ್ಯಾದ್ಯಂತ ಸುಮಾರು 500 ಕೋಟಿ ಬಾರಿಗೆ ಮಹಿಳೆಯರು ಈ ಯೋಜನೆಯ ಪ್ರಯೋಜನ ಪಡೆದುಕೊಂಡಿದ್ದಾರೆ. ಯೋಜನೆಗಾಗಿ ಸರ್ಕಾರ ಸುಮಾರು 60 ಸಾವಿರ ಕೋಟಿ ರೂಪಾಯಿ ವೆಚ್ಚ ಮಾಡಿದೆ ಎಂದು ಅವರು ಮಾಹಿತಿ ನೀಡಿದರು. ಶಕ್ತಿ ಯೋಜನೆಯಿಂದ ಕರ್ನಾಟಕದ ಮಹಿಳೆಯರು ತಮ್ಮ ಗುರುತಿನ ಚೀಟಿಯನ್ನು ತೋರಿಸಿ ರಾಜ್ಯಾದ್ಯಂತ ಬಸ್ ಗಳಲ್ಲಿ ಉಚಿತವಾಗಿ ಪ್ರಯಾಣ ಮಾಡುತ್ತಿದ್ದಾರೆ. ಇದರಿಂದ ಧಾರ್ಮಿಕ ಕ್ಷೇತ್ರಗಳಿಗೆ ಪ್ರವಾಸಿಗರ ಸಂಖ್ಯೆ ಹೆಚ್ಚಾಗಿದೆ. ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಎಲ್ಲಾ ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿ ಮಾಡಿದೆ. ಶಕ್ತಿ ಯೋಜನೆಯಡಿ ಮಹಿಳೆಯರಿಗೆ ಸುರಕ್ಷಿತ ಪ್ರಯಾಣಕ್ಕೆ ಒತ್ತು ನೀಡಲಾಗಿದೆ. ಮುಂದಿನ ದಿನಗಳಲ್ಲಿ ಮಹಿಳೆಯರು ಈ ಯೋಜನೆಯನ್ನು ಇನ್ನಷ್ಟು ಸದ್ಬಳಕೆ ಮಾಡಿಕೊಳ್ಳಬೇಕೆಂದು ಕೋರುತ್ತೇನೆ ಎಂದು ಹೇಳಿದರು.

# ಸಂತ ಜೋಸೆಫರ ಕಾಲೇಜಿನಲ್ಲಿ ಜು. 18ಕ್ಕೆ ಉದ್ಯೋಗ ಮೇಳ




ಹಾಸನ: ನಗರದ ಬಿ. ಕಾಟೀಹಳ್ಳಿಯಲ್ಲಿರುವ ಸಂತ ಜೋಸೆಫರ ಕಾಲೇಜು ಆವರಣದಲ್ಲಿ ಜು. 16 ಹಾಗೂ 17 ರಂದು ಕೌಶಲಾಭಿವೃದ್ಧಿ ಕಾರ್ಯಾಗಾರ, ಜು. 18ಕ್ಕೆ ಉದ್ಯೋಗ ಮೇಳ ಹಮ್ಮಿಕೊಳ್ಳಲಾಗಿದೆಯೆಂದು ಕಾಲೇಜಿನ ಫಾದರ್ ಓಲ್ವಿನ್ ಯಗಾಸ್ ತಿಳಿಸಿದರು.

ಸುದ್ದಿಗೋಷ್ಟಿಯಲ್ಲಿ ಸೋಮವಾರ ಮಾತನಾಡಿ, ಮ್ಯಾಜಿಕ್ ಬಸ್ ಇಂಡಿಯಾ ಫೌಂಡೇಶನ್ ವತಿಯಿಂದ ಈ ಕಾರ್ಯಕ್ರಮ ಆಯೋಜಿಸಲಾಗಿದೆ. ಪದವಿ, ಸ್ನಾತಕೋತ್ತರ, ಐಟಿಐ ಮತ್ತು ಡಿಪ್ಲೊಮಾ ಪಾಸಾದವರು ಹಾಗೂ ಇತರೆ ಕೌಶಲ ಹೊಂದಿರುವ ಅರ್ಹ ಅಭ್ಯರ್ಥಿಗಳು ಸಂದರ್ಶನದಲ್ಲಿ ಪಾಲ್ಗೊಳ್ಳಬಹುದು. ಬೆಂಗಳೂರು, ಹಾಸನದ ವಿವಿಧ ಕಂಪನಿಗಳಾದ ಅಪೋಲೋ ಫಾರ್ಮಸಿ, ಕೆ 12 ಟೆಕ್ ಸರ್ವಿಸ್, ಮುತ್ತೂಟ್ ಫೈನಾನ್ಸ್, ಈ ವೈ ಜಾಬ್ ಕನ್ಸಲ್ಟೆನ್ಸಿ, ಮ್ಯಾಜಿಕಲ್ ಬಿಸಿನೆಸ್ ಸಲೂಷನ್ಸ್, ಕ್ಯೂಸ್ ಕಾರ್ಪ್, ಮೆಚರ್ಡ್ ಕ್ಯಾರಿಯರ್ ಕನೆಕ್ಟ್, ಐ, ಪ್ರೋಸೆಸ್, ಬಿ.ಎಸ್.ಎಸ್. ಮೈಕ್ರೋ ಫೈನಾನ್ಸ್, ಫ್ಲಿಪ್ ಕಾರ್ಟ್ ಕಂಪನಿಗಳು ಭಾಗವಹಿಸಲಿವೆ.

# ಅಪಾಯದಿಂದ ಪಾರಾದ ಪ್ರವಾಸಿಗರು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಸಕಲೇಶಪುರ: ಚಾಲಕನ ನಿಯಂತ್ರಣ ತಪ್ಪಿ ಕಾರು ಜಲಪಾತಕ್ಕೆ ಬಿದ್ದಿರುವ ಘಟನೆ ಶಿರಾಡಿ ಘಾಟ್‌ನಲ್ಲಿ ಭಾನುವಾರ ನಡೆದಿದ್ದು ಅದೃಷ್ಟವಶಾತ್ ಯಾವ ಪ್ರಾಣಾಪಾಯ ಸಂಭವಿಸಿಲ್ಲ. ಬೆಂಗಳೂರು ಮೂಲದ ಐದು ಜನ ಪ್ರವಾಸಿಗರು ಪ್ರವಾಸಕ್ಕಾಗಿ ಬಂದಿದ್ದರು. ಚಾಲಕನ ನಿಯಂತ್ರಣ ತಪ್ಪಿ ಕಾರು ರಸ್ತೆಯಿಂದ ನೆಲಕ್ಕೆ ಉರುಳಿದೆ. ರಸ್ತೆ ಪಕ್ಕದಲ್ಲಿ ಹರಿಯುತ್ತಿದ್ದ ಕಿರು ಜಲಪಾತ ವೀಕ್ಷಣೆಗೆಂದು ವಾಹನ ನಿಲ್ಲಿಸುವಾಗ ಅವಘಡ ಸಂಭವಿಸಿದೆ.

ಕಾರು ಚಾಲಕನಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಮಲೆನಾಡು ಭಾಗದಲ್ಲಿ ಭಾರೀ ಮಳೆಯಿಂದ ಕಿರು ಜಲಪಾತಗಳು ತುಂಬಿ ಹರಿಯುತ್ತಿವೆ. ಇನ್ನೂ ಕೆಲವು ಕಾಡಿನಿಂದ ರಸ್ತೆ ಕಡೆಗೆ ನೀರು ಧುಮ್ಮಿಕ್ಕುತ್ತಿದೆ. ಅದನ್ನು ನೋಡಲು ಪ್ರವಾಸಿಗರು ಬರುತ್ತಿದ್ದಾರೆ. ಸ್ಥಳಕ್ಕೆ ಭೇಟಿ ನೀಡಿದ ಗ್ರಾಮಾಂತರ ಠಾಣೆ ಪೊಲೀಸರು ವಾಹನವನ್ನು ಸುರಕ್ಷಿತವಾಗಿ ಮೇಲಕ್ಕೆತ್ತಿದ್ದಾರೆ.

# ಅವಮಾನ ಸಹಿಸುವ ಶಕ್ತಿಯೇ ಸಂಸ್ಕೃತಿಯ ಮೌಲ್ಯ : ಪ್ರಸಾದ್ ರಕ್ಷಿದಿ

## ಮಲ್ನಾಡ್ ಮನಸ್ಸು ಪುಸ್ತಕ ಬಿಡುಗಡೆ | ಕೃತಿ ಪರಿಚಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಸಕಲೇಶಪುರ: ಅವಮಾನವನ್ನು ಶಾಂತಿಯುತವಾಗಿ ನಿರ್ವಹಿಸುವ ಶಕ್ತಿಯೇ ಮಾನವೀಯ ಸಂಸ್ಕೃತಿಯ ಮೌಲ್ಯ. ಪ್ರತಿಕ್ರಿಯೆ ನೀಡುವ ತೀವ್ರತೆಗಿಂತ ತಾಳ್ಮೆಯಿಂದ ಪ್ರತಿಕ್ರಿಯಿಸದಿರುವ ಪ್ರಜ್ಞೆ ಹೆಚ್ಚು ಶ್ರೇಷ್ಟ ಎಂದು ಸಾಹಿತಿ ಹಾಗೂ ರಂಗಕರ್ಮಿ ಪ್ರಸಾದ್ ರಕ್ಷಿದಿ ಅಭಿಪ್ರಾಯಪಟ್ಟರು.

ಪಟ್ಟಣದ ಲಯನ್ಸ್ ಭವನದಲ್ಲಿ ಕನ್ನಡ ಸಾಹಿತ್ಯ ಪರಿಷತ್, ಕಾರ್ಯನಿರತ ಪತ್ರಕರ್ತರ ಸಂಘ, ಡ್ರಗ್ಸ್ ಮುಕ್ತ ಸಕಲೇಶಪುರ ಆಂದೋಲನ ಹಾಗೂ ವಿವಿಧ ಸಂಘ-ಸಂಸ್ಥೆಗಳ ಆಶ್ರಯದಲ್ಲಿ ಲೇಖಕ ಮಲ್ನಾಡ್ ಮೆಹಬೂಬ್ ಅವರ ಮಲ್ನಾಡ್ ಮನಸ್ಸು ಪುಸಕದ ಬಿಡುಗಡೆ ಸಮಾರಂಭದಲ್ಲಿ ಪುಸ್ತಕದ ಬಗ್ಗೆ ಮಾತನಾಡಿದ ಅವರು, ಸಾಮಾಜಿಕವಾಗಿ ಅವಮಾನಗಳು ಅನಿವಾರ್ಯ. ಆದರೆ, ಅವಮಾನವನ್ನು ಜೀರ್ಣಿಸಿಕೊಳ್ಳುವ ಶಕ್ತಿ ಆತ್ಮ ಚಿಂತನೆಯಿಂದ ಬರಬೇಕು. ಅದನ್ನು ಮೀರಿ ಬದುಕಬೇಕು ಎಂದರು.

ಮೆಹಬೂಬ್ ಅವರ ಬರಹಗಳು ಈ ಒಳನೋಟಕ್ಕೆ ದಾರಿ ಮಾಡಿಕೊಡುವ ಸಾಮರ್ಥ್ಯ ಹೊಂದಿವೆ. ಅವರು ಬದುಕಿನ ನೋವು, ಧೈರ್ಯ, ಮತ್ತು ನಿರಾಳತೆಯನ್ನು ಅಕ್ಷರ ರೂಪದಲ್ಲಿ ಸೆರೆ ಹಿಡಿದಿದ್ದಾರೆ ಎಂದರು.

ಡ್ರಗ್ಸ್ ಮುಕ್ತ ಸಮಾಜ ನಿರ್ಮಾಣಕ್ಕೆ ಸಮಾಜದ ಪಾತ್ರ ಬಗ್ಗೆ ಪರಿಣಾಮಕಾರಿ ಲೇಖನಗಳಿವೆ. ಬದುಕಿನ ಗಂಭೀರ ಸ್ಥಿತಿಯಲ್ಲಿ ತೆಗೆದುಕೊಳ್ಳಬೇಕಾದ ಅನಿವಾರ್ಯ ನಿರ್ಣಯಗಳ ಬಗ್ಗೆ, ಸಾಹಿತಿಗಳ ಪರಿಚಯ, ಓದುವ, ಬರೆಯುವ ಮತ್ತು ಸಮಾಜದೊಂದಿಗೆ ಬೆರೆತು ಬಾಳುವ ಪ್ರಾಮುಖ್ಯತೆಯ ಬಗ್ಗೆ ಲೇಖನಗಳು ಉತ್ತಮವಾಗಿವೆ ಎಂದರು.

ಮಾಜಿ ಶಾಸಕ ಎಚ್.ಎಂ. ವಿಶ್ವನಾಥ್ ಮಾತನಾಡಿ, ನೋವು-ನಲಿವಿನ ಸಂಗ್ರಹವಾದ ಈ ಪುಸ್ತಕ ತಾತ್ವಿಕತೆಗೆ ತಾಕಲಾಡುತ್ತದೆ. ಸಮಾಜವನ್ನು ಇಂದು ಡ್ರಗ್ಸ್ ಕಾಡುತ್ತಿದೆ. ಪ್ರಮುಖವಾಗಿ ಯುವ ಜನಾಂಗವನ್ನು ಇದರಿಂದ ಮುಕ್ತಗೊಳಿಸಲು ಸಮಾಜ ಒಂದಾಗಬೇಕು. ಆ. 21ರಂದು ಸಕಲೇಶಪುರದಲ್ಲಿ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದರು.

ಸಾಮಾಜಿಕ ಕಾರ್ಯಕರ್ತ ಯಡೇಹಳ್ಳಿ ಆರ್. ಮಂಜುನಾಥ್ ಮಾತನಾಡಿ, ಮಲ್ನಾಡ್ ಮನಸ್ಸು ಎಂಬ ಕೃತಿಯು ನುಡಿದಂತೆ ಬದುಕುವ ವ್ಯಕ್ತಿಯ ಬದುಕಿನ ಪ್ರತಿಫಲನವಾಗಿದೆ. ಅನ್ಯಾಯಗಳ ವಿರುದ್ಧ ಧ್ವನಿ ಎತ್ತುವವರು ನಿಜವಾದ ಬರಹಗಾರರು. ಈ ಬರವಣಿಗೆಗಳು ಮೌನವಾಗಿರುವವರಿಗೂ ಮಾತು ಕೊಟ್ಟಂತಿವೆ ಎಂದರು.

ಜುಮ್ಮಾ ಮಸೀದಿ ಅಧ್ಯಕ್ಷ ಇಬ್ರಾಹಿಂ ಕೆ. ಮುಸ್ಲಿಯಾರ್ ಮಾತನಾಡಿ, ಮೆಹಬೂಬ್ ಎಂದರೆ ಪ್ರೀತಿಗೆ ಅರ್ಹರು. ಹೆಸರಿಗೆ ತಕ್ಕಂತೆ ಅವರು ಧರ್ಮ, ಜಾತಿ, ವರ್ಣ ಎಲ್ಲರೊಂದಿಗೂ ಸಮಾನವಾಗಿ ಬೆರೆಯುವ ವ್ಯಕ್ತಿ. ತಮ್ಮ ಸುತ್ತಲಿನ ಅಸಮತೋಲನಗಳ ಕುರಿತು ಧೈರ್ಯವಾಗಿ ಮಾತನಾಡುವ ಗಟ್ಟಿನಡತೆ ಅವರದು. ಅವರ ಬರಹಗಳು ಬಂಡಾಯಕ್ಕೆ, ಜನಪರವಾದ ಧ್ವನಿಗೆ, ಮತ್ತು ಆರೋಗ್ಯಕರ ಸಾಮಾಜಿಕ ಕಳಕಳಿಗೆ ಖ್ಯಾತಿಯಾಗಿವೆ. ಈ ಪುಸ್ತಕ ಸಮಾಜಮುಖಿಯಾಗಿದೆ ಎಂದರು.

ಕಾಂಗ್ರೆಸ್ ಮುಖಂಡ ಮುರುಳಿ ಮೋಹನ್ ಮಾತನಾಡಿ, ಸಮಸ್ಯೆಗಳ ನಡುವೆ ಮತ್ತೊಬ್ಬರಿಗೆ ನೆರವಾಗುವ ಮನಸ್ಸು ಎಲ್ಲರಿಗೂ ದೊರೆಯದು. ಇಂತಹ ಸಂದರ್ಭಗಳಲ್ಲಿ ಎದುರಾದ ಅವಮಾನಗಳು ಮುಂದಿನ ದಿನಗಳಲ್ಲಿ ಸನ್ಮಾನವಾಗಿ ಬರುತ್ತವೆ. ಲೇಖಕರಾಗುವುದು, ಪುಸ್ತಕ ಹೊರತರುವುದು ಸುಲಭವಲ್ಲ. ಆದರೆ, ಮೆಹಬೂಬ್ ಇದನ್ನು ಸಾಧಿಸಿದ್ದಾರೆ ಎಂದು ಮೆಚ್ಚುಗೆ ಸೂಚಿಸಿದರು.

ಪತ್ರಕರ್ತ ಹೆತ್ತೂರು ನಾಗರಾಜ್ ಮಾತನಾಡಿ, ಮಲ್ನಾಡ್ ಮೆಹಬೂಬ್ ಅವರ ಬರಹಗಳಲ್ಲಿ ಗಂಭೀರ ಸಂವೇದನೆ ಇದೆ. ಪತ್ರಕರ್ತನ ದುರದೃಷ್ಟದ ಅನುಭವ, ಸಾಮಾಜಿಕ ಸಂಕೀರ್ಣತೆಗಳ ವ್ಯಾಖ್ಯಾನ ಈ ಲೇಖನಗಳಲ್ಲಿ ನಿಖರವಾಗಿ ಸೆರೆಯಾಗಿದೆ ಎಂದರು.

ತಾಲ್ಲೂಕು ಸಾಹಿತ್ಯ ಪರಿಷತ್ ಅಧ್ಯಕ್ಷೆ ಶಾರದಾ ಗುರುಮೂರ್ತಿ ಮಾತನಾಡಿ, ಈ ಪುಸ್ತಕದಲ್ಲಿ ಮೌಲಿಕ ಅಭಿವ್ಯಕ್ತಿಯ ಜೊತೆಗೆ ಸಾಮಾಜಿಕ ಹೊಣೆಗಾರಿಕೆಯ ಅರಿವಿದೆ. ಬರಹಗಾರನ ಹೊಣೆ ಹೇಗಿರಬೇಕು ಎಂಬುದಕ್ಕೆ ಇದು ಉದಾಹರಣೆಯಾಗಿದೆ ಎಂದು ಹೇಳಿದರು.

ಲೇಖಕ ಮಲ್ನಾಡ್ ಮೆಹಬೂಬ್ ಮಾತನಾಡಿ, ಇಷ್ಟು ಜನರು ಕಾರ್ಯಕ್ರಮಕ್ಕೆ ಬಂದು ಪ್ರೋತ್ಸಾಹ ನೀಡಿದ್ದು ನನಗೆ ಅತೀವ ಸಂತೋಷ ತಂದಿದೆ. ಓದು ಮತ್ತು ಬರವಣಿಗೆ ಎಷ್ಟೇ ತೀವ್ರವಾದರೂ, ಸಮಾನ ಮನಸ್ಕರ ಬೆಂಬಲವೇ ಬರಹಗಾರನಿಗೆ ಬಲ. ಮಲ್ನಾಡ್ ಮನಸ್ಸು ನನ್ನ ಅನುಭವಗಳ ಸಂಗ್ರಹ. ಓದುಗರಿಗೆ ಇದು ಆಂತರಿಕ ಬೆಳಕಾಗಲಿ ಎಂದರು.

ಬಿಜೆಪಿ ಮುಖಂಡ ಜೈ ಮಾರುತಿ ದೇವರಾಜ್ ಮಾತನಾಡಿ, ಮೆಹಬೂಬ್ ಒಬ್ಬ ಪರೋಪಕಾರಿ. ಬರವಣಿಗೆ ಇವರ ಹವ್ಯಾಸ. ಬರಹಗಾರನ ಬದುಕು ಸುಲಭವಲ್ಲ. ಸಂಕಷ್ಟವನ್ನು ಎದುರಿಸಿ ಎಲ್ಲವನ್ನೂ ಸಹಿಸುವ ಇವರ ಜೀವನ ಶೈಲಿಯಂತೆ ಅವರ ಬರಹವು ಆಕರ್ಷಕವಾಗಿದೆ. ಇವರ ಹಿಂದಿನ ಮೂರು ಪುಸ್ತಕಗಳು ಉತ್ತಮವಾಗಿದ್ದವು. ಈ ಪುಸ್ತಕವೂ ಅದೇ ಸಾಲಿನಲ್ಲಿ ಸಾಗಿದೆ ಎಂದರು.

ವೇದಿಕೆಯಲ್ಲಿ ನಮ್ಮ ಪತ್ರಕರ್ತ ತೌಫೀಕ್ ಅಹಮದ್, ಜಾಮಿಯ ಮಸೀದಿ ಉಪಾಧ್ಯಕ್ಷ ಅಸ್ಲಾಂ, ಹಿರಿಯ ದಲಿತ ಮುಖಂಡ ಹೆತ್ತೂರು ಅಣ್ಣಯ್ಯ ಉಪಸ್ಥಿತರಿದ್ದರು.

ಪತ್ರಕರ್ತರ ಸಂಘದ ಅಧ್ಯಕ್ಷ ಜೈ ಭೀಮ್ ಮಂಜು ಕಾರ್ಯಕ್ರಮ ನಿರೂಪಿಸಿದರು. ಸಾಸು ವಿಶ್ವನಾಥ್ ಕೊಳಲುವಾದನದ ಮೂಲಕ ಸ್ವಾಗತಿಸಿದರೆ, ಸಾಹಿತ್ಯ ಪರಿಷತ್ ಕಾರ್ಯದರ್ಶಿ ಯೋಗೇಶ್ ಸ್ವಾಗತ ಭಾಷಣ ಮಾಡಿದರು. ಪತ್ರಕರ್ತ ಅಕ್ಬರ್ ಜುನೈದ್ ವಂದನೆ ಸಲ್ಲಿಸಿದರು.

# ಸಮಾಜ ಸುಧಾರಣೆಯಲ್ಲಿ ಲಯನ್ಸ್ ಸೇವೆ ಶ್ಲಾಘನೀಯ



ಬೇಲೂರು: ಗ್ರಾಮೀಣ ಭಾಗದಲ್ಲಿ ಸೇವಾ ಸಂಸ್ಥೆಯನ್ನು ಹುಟ್ಟು ಹಾಕಿ 13 ವರ್ಷಗಳಿಂದ ನಿರಂತರವಾಗಿ ಸೇವೆ ಸಲ್ಲಿಸುತ್ತಾ ನೂತನ ಕಟ್ಟಡ ಹೊಂದಿರುವ ಅರೇಹಳ್ಳಿ ಲಯನ್ಸ್ ಸಂಸ್ಥೆಯ ಕಾರ್ಯವು ಶ್ಲಾಘನೀಯ ಎಂದು ಪೂರ್ವ ಬಹು ಪರಿಷತ್ತಿನ ಅಧ್ಯಕ್ಷ ಪಿಎಂಜೆಎಫ್ ಲಯನ್ಸ್ ವಸಂತ್ ಕುಮಾರ್ ಶೆಟ್ಟಿ ಹೇಳಿದರು.

ತಾಲ್ಲೂಕಿನ ಅರೇಹಳ್ಳಿಯ ರೋಟರಿ ಭವನದಲ್ಲಿ ಆಯೋಜಿಸಿದ್ದ 2025-26ನೇ ಸಾಲಿಗೆ ಆಯ್ಕೆಯಾದ ಲಯನ್ಸ್ ಸಂಸ್ಥೆಯ ನೂತನ ಪದಾಧಿಕಾರಿಗಳಿಗೆ ಪದಗ್ರಹಣ ನೆರವೇರಿಸಿ ಮಾತನಾಡಿದ ಅವರು, ಜನರನ್ನು ದೇವರೆಂದು ಭಾವಿಸಿ ಪ್ರತಿಯೊಬ್ಬ ಸದಸ್ಯನು ಸೇವೆ ಮಾಡಬೇಕಾಗುತ್ತದೆ. ಸೇವೆಯನ್ನು ಮಾಡಲು ಮುನ್ನಡೆಸಬೇಕು, ಮುನ್ನಡೆಸುವವನು ಸೇವೆ ಮಾಡುತ್ತಾನೆ ಎಂಬ ಧ್ಯೇಯವಾಕ್ಯವನ್ನು ಹೊಂದಿದ್ದು ನಾವೆಲ್ಲರೂ ಸೇವೆಯೇ ಪರಮೋಚ್ಚ ಕಾರ್ಯವೆಂದು ಭಾವಿಸಬೇಕು ಎಂದರು.

ನೂತನ ಲಯನ್ಸ್ ಅಧ್ಯಕ್ಷೆ ರಶ್ಮಿ ಸೋಮಯ್ಯ ಮಾತನಾಡಿ, ಸಕಲೇಶಪುರ ಲಯನ್ಸ್ ಸಂಸ್ಥೆಯ ಪದಾಧಿಕಾರಿಗಳು ಅರೇಹಳ್ಳಿ ಲಯನ್ಸ್ ಸಂಸ್ಥೆ ಹುಟ್ಟುಹಾಕಲು ಕಾರಣಕರ್ತರಾಗಿದ್ದಾರೆ. 2013 ರಿಂದ ಲಯನ್ಸ್ ಸಂಸ್ಥೆಯಲ್ಲಿ ಸಕ್ರಿಯವಾಗಿ 2022ರಲ್ಲಿ ಸದಸ್ಯೆಯಾಗಿ ಸೇರ್ಪಡೆಯಾಗಲು ಅವಕಾಶ ದೊರಕಿತು. 2025-26 ನೇ ಸಾಲಿಗೆ ಪ್ರಥಮ ಮಹಿಳಾ ಅಧ್ಯಕ್ಷೆಯಾಗಿದ್ದು ಸಹಕರಿಸಿದ ಎಲ್ಲರಿಗೂ ಧನ್ಯವಾದಗಳು. ನಾನಾ ಸಾಮಾಜಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿರುವ ನಮ್ಮ ಸಂಸ್ಥೆಯು ಮುಂದಿನ ದಿನಗಳಲ್ಲಿ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಯಶಸ್ವಿ ಸಂಸ್ಥೆಯಾಗಿ ಹೊರಹೊಮ್ಮಲು ಶ್ರಮಿಸಲಾಗುವುದು ಎಂದರು.

2025-26ನೇ ಸಾಲಿಗೆ ಹೆಚ್.ಎಸ್.ಬೃಂದನ್ ಕಾರ್ಯದರ್ಶಿ, ಸೌಜನ್ಯ ಪೃಥ್ವಿರಾಜ್ ಖಜಾಂಚಿಯಾಗಿ ಅಧಿಕಾರ ಸ್ವೀಕರಿಸಿದರು. ಕಾರ್ಯಕ್ರಮದಲ್ಲಿ ಶಾಸಕ ಸಿಮೆಂಟ್ ಮಂಜು, ಕ್ಯಾಬಿನೇಟ್ ಸೆಕ್ರೆಟರಿ ಚಂದ್ರೇಗೌಡ, ಸಂಜೀತ್ ಶೆಟ್ಟಿ, ಪ್ರಾಂತೀಯ ಅಧ್ಯಕ್ಷ ಅಬ್ದುಲ್ ಲತೀಫ್, ವಲಯಾಧ್ಯಕ್ಷ ಚಾಮರಾಜ್, ನಿಕಟ ಪೂರ್ವ ಅಧ್ಯಕ್ಷ ಸಂತೋಷ್ ಕುಮಾರ್ ಭಾಗವಹಿಸಿದ್ದರು.

# ರೆಡ್ ಕ್ರಾಸ್ ಆರೋಗ್ಯ ಶಿಬಿರಕ್ಕೆ ಉತ್ತಮ ಪ್ರತಿಕ್ರಿಯೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹಾಸನ: ಜಿಲ್ಲೆಯಲ್ಲಿ ಹೃದಯಾಘಾತದ ಆತಂಕ ಹೆಚ್ಚಾದ ಹಿನ್ನೆಲೆ ಭಾರತೀಯ ರೆಡ್‌ಕ್ರಾಸ್ ಭವನದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಉಚಿತ ಹೃದಯ ತಪಾಸಣೆ ಮತ್ತು ಅರಿವು ಕಾರ್ಯಕ್ರಮಕ್ಕೆ ಜಿಲ್ಲಾದ್ಯಂತ ನೂರಾರು ಸಂಖ್ಯೆಯಲ್ಲಿ ಜನರು ಆಗಮಿಸಿದ್ದರು.

ಬೆಂಗಳೂರಿನ ಮಣಿಪಾಲ್, ನಗರದ ಜನಪ್ರಿಯ ಆಸ್ಪತ್ರೆ, ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ರೋಟರಿ ಸಹಯೋಗದಲ್ಲಿ ನಡೆದ ಹೃದಯ ತಪಾಸಣಾ ಶಿಬಿರದಲ್ಲಿ ಬಿಪಿ, ಶುಗರ್, ಇಸಿಜಿ, ಎಕೋ ಪರೀಕ್ಷೆ ನಡೆಸಲಾಯಿತು. ಸಾಮಾನ್ಯ ಪರೀಕ್ಷೆ ನಡೆಸಿದ ಬಳಿಕ ಹೃದಯ ಸಂಬಂಧಿ ಖಾಯಿಲೆ ಕಂಡುಬಂದರೆ, ಹೃದ್ರೋಗ ತಜ್ಞರು ತಪಾಸಣೆ ನಡೆಸಿ, ಅಗತ್ಯ ಔಷಧ ಮತ್ತು ಆರೋಗ್ಯಕರ ಸಲಹೆ ನೀಡಿದರು. ಚಿಕಿತ್ಸೆ ಅಗತ್ಯ ಇದ್ದವರಿಗೆ ಸೂಕ್ತ ಆಸ್ಪತ್ರೆಯನ್ನು ಸಂಪರ್ಕಿಸುವಂತೆ ಸೂಚಿಸಲಾಯಿತು.

ಹಿಮ್ಸ್ ನಿರ್ದೇಶಕ ಡಾ.ಬಿ.ರಾಜಣ್ಣ ಮಾತನಾಡಿ, ಹೃದಯಾಘಾತದ ಬಗ್ಗೆ ಮಾಧ್ಯಮಗಳ ಬರುತ್ತಿರುವಂತೆ ಆತಂಕ ಪಡುವ ಅಗತ್ಯವಿಲ್ಲ. ನಾವು ಈ ಬಗ್ಗೆ ಅಂಕಿ-ಅಂಶ ಪಡೆದು ವರದಿ ಸಿದ್ಧಪಡಿಸಿದ್ದೇವೆ. ಜಿಲ್ಲೆಯಲ್ಲಿ ಮೇ ಮತ್ತು ಜೂನ್‌ನಲ್ಲಿ ಹೃದಯಾಘಾತದ ಸಂಖ್ಯೆ ಹೆಚ್ಚಳವಾಗಿಲ್ಲ. 2025ರಲ್ಲಿ ಆಗುತ್ತಿದ್ದ ಸಾವಿಗೂ ಈ ವರ್ಷ ಆಗುತ್ತಿರುವ ಸಾವಿನಲ್ಲಿ ಯಾವುದೇ ವ್ಯತ್ಯಾಸಗಳಿಲ್ಲ. ಜಿಲ್ಲೆಯ್ಲಿ ಶೇ.5 ರಿಂದ 6 ರಷ್ಟು ಸಾವಾಗಿದೆ ಎಂದು ತಿಳಿಸಿದರು. ನಮ್ಮ ಆರೋಗ್ಯ ಕಾಪಾಡಿಕೊಳ್ಳಲು ಜಾಗೃತರಾಗಬೇಕು. ಹೃದಯಘಾತವೆಂದು ಜಿಲ್ಲೆಯಲ್ಲಿ 24 ಜನರು ಸಾವನಪ್ಪಿದ್ದಾರೆ. ಇದರಲ್ಲಿ ನಾಲ್ವರು ಮಾತ್ರ ಹೃದಯಾಘಾತದಿಂದ ಉಳಿದವರು ಬೇರೆ ಬೇರೆ ಕಾರಣಕ್ಕೆ ಮೃತಪಟ್ಟಿದ್ದಾರೆ. ಇದರಲ್ಲಿ 13 ಜನರು 40 ರಿಂದ 45 ವಯಸ್ಸಿನವರು. ಉಳಿದವರು 19 ರಿಂದ 21 ವರ್ಷದವರು ಎಂಬುವುದೇ ಬೇಸರದ ಸಂಗತಿ ಎಂದು ಹೇಳಿದರು.

ಆಟೋ, ಟ್ಯಾಕ್ಸಿ ಚಾಲಕರು ಹೆಚ್ಚು ಹೃದಯಾಘಾತಕ್ಕೆ ಒಳಗಾಗುತ್ತಿದ್ದಾರೆ. ಧೂಮಪಾನ, ಮದ್ಯಪಾನ, ಇನ್ನು ಕೆಲವರು ಕುಟುಂಬದ ಹಿನ್ನಲೆಯಿಂದ ಹೃದಯಾಘಾತಕ್ಕೆ ತುತ್ತಾಗುತ್ತಿದ್ದಾರೆ. ಹೀಗಾಗಿ ಕಾಲ ಕಾಲಕ್ಕೆ ಹೃದಯ ಪರೀಕ್ಷೆ ಮಾಡಿಸಿಕೊಳ್ಳುವುದು ಉತ್ತಮವಾಗಿದೆ. ಪ್ರತಿನಿತ್ಯ ಕೆಲ ಸಮಯ ಯೋಗಕ್ಕಾಗಿ ಮೀಸಲಿಡಬೇಕು. ತಮ್ಮ ಹೃದಯ ಮಿಡಿತವನ್ನು ಅರ್ಥ ಮಾಡಿಕೊಳ್ಳಬೇಕೆಂದು ಸಲಹೆ ನೀಡಿದರು.

ಜನಪ್ರಿಯ ಆಸ್ಪತ್ರೆ ಮುಖ್ಯಸ್ಥ ಡಾ.ಅಬ್ದುಲ್ ಬಷೀರ್ ಮಾತನಾಡಿ, ಕಳೆದ ಒಂದುವರೆ ತಿಂಗಳಿಂದ ಜಿಲ್ಲೆಯಲ್ಲಿ ಹೃದಯಾಘಾತಕ್ಕೆ ಸಂಬಂಧ ಪಟ್ಟ ಸುದ್ದಿಯನ್ನೇ ಹೆಚ್ಚಾಗಿ ಕೇಳುತ್ತಿದ್ದೇವೆ. ಆದರೆ, ಈ ಬಗ್ಗೆ ಭಯಪಡುವ ಅಗತ್ಯವಿಲ್ಲ, ಜಾಗೃತರಾಗಿ ಏನು ಮಾಡಬೇಕು ಎಂಬುದರ ಬಗ್ಗೆ ತಿಳುವಳಿಕೆ ಅಗತ್ಯ. ಇತ್ತೀಚಿನ ದಿನಗಳಲ್ಲಿ ಚಿಕ್ಕ ವಯಸ್ಸಿಗೆ ಬಿಪಿ, ಶುಗರ್ ಬರುತ್ತಿದೆ ಅದನ್ನು ತಡೆಗಟ್ಟಲು ಏನು ಮಾಡಬೇಕೆಂಬ ಅರಿವು ಪಡೆದು ಜೀವನ ಶೈಲಿಯನ್ನು ರೂಪಿಸಿಕೊಳ್ಳಬೇಕೆಂದು ಸಲಹೆ ನೀಡಿದರು.

ಜಿಲ್ಲೆಯಲ್ಲಿ ಸಂಭವಿಸಿರುವ ಎಲ್ಲಾ ಸಾವುಗಳು ಹೃದಯಘಾತದಿಂದ ಎನ್ನುವುದಕ್ಕೆ ಯಾವುದೇ ಪುರಾವೆ ಇಲ್ಲ. ಆದರೆ, ನಾವೆಲ್ಲರೂ ಜಾಗೃತರಾಗಿದ್ದು, ಮುಂಜಾಗ್ರತವಾಗಿ ಹೃದಯ ಸಂಬಂಧಿ ಪರೀಕ್ಷೆಗಳನ್ನು ಮಾಡಿಸಿಕೊಳ್ಳಬೇಕು. ಮುಂಜಾಗ್ರತಾ ಕ್ರಮಗಳಿಂದ ಹೃದಯಾಘಾತವನ್ನು ತಡೆಗಟ್ಟಲು ಸಾಧ್ಯ. ಆರೋಗ್ಯಕರ ಅಭ್ಯಾಸಗಳನ್ನು ಅಳವಡಿಸಿಕೊಳ್ಳಬೇಕು. ನಿಯಮಿತ ವ್ಯಾಯಾಮ, ಸಮತೋಲಿತ ಆಹಾರ, ಧೂಮಪಾನ ಮತ್ತು ಮದ್ಯಪಾನ ತ್ಯಜಿಸುವುದು, ಒತ್ತಡ ನಿರ್ವಹಣೆ, ಆರೋಗ್ಯಕರ ಆಹಾರ, ಹಣ್ಣು, ತರಕಾರಿ ಧಾನ್ಯ ಸೇವನೆ ಮಾಡಬೇಕೆಂದು ತಿಳಿಸಿದರು.

ಮಣಿಪಾಲ್ ಆಸ್ಪತ್ರೆ ಹೃದಯರೋಗ ತಜ್ಞ ಡಾ.ಲೋಕೇಶ್, ಭಾರತೀಯ ರೆಡ್ ಕ್ರಾಸ್ ಜಿಲ್ಲಾ ಸಭಾಪತಿ ಹೆಚ್.ಪಿ.ಮೋಹನ್, ಭಾರತೀ ವೈದ್ಯಕೀಯ ಸಂಘದ ಅಧ್ಯಕ್ಷ ಡಾ. ಶ್ರೀರಂಗ ಡಾಂಗೆ, ಡಾ.ಮನೋಜ್ ಕುಮಾರ್, ಯೋಗೀಶ್, ಬಿ.ಆರ್.ಉದಯಕುಮಾರ್, ಶಬ್ಬೀರ್ ಅಹಮದ್, ಕೆ.ಟಿ.ಜಯಶ್ರೀ ಇದ್ದರು.

# ಮಠ-ಮಾನ್ಯಗಳ ಪರಂಪರೆಯಿಂದ ಸಂಸ್ಕೃತಿ ಉಳಿವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಚನ್ನರಾಯಪಟ್ಟಣ: ಮಠ ಮಾನ್ಯಗಳ ಪರಂಪರೆಯಿಂದ ಸಂಸ್ಕೃತಿ, ಸಂಸ್ಕಾರ ಹಾಗೂ ಧರ್ಮ ಉಳಿದಿದೆ ಎಂದು ಬಾಳೆಹೊನ್ನೂರು ಮಠದ ಶ್ರೀ ರಂಭಾಪುರಿ ವೀರಸೋಮೇಶ್ವರ ಸ್ವಾಮೀಜಿ ಹೇಳಿದರು.

ತಾಲ್ಲೂಕಿನ ನಾಗರನವಿಲೆ ಗ್ರಾಮದಲ್ಲಿ ಶಿವಾನುಗ್ರಹ ಸೇವಾ ಪ್ರತಿಷ್ಠಾನದಿಂದ ಹಮ್ಮಿಕೊಂಡಿದ್ದ ಅಡ್ಡಪಲ್ಲಕ್ಕಿ ಮಹೋತ್ಸವ, ಸುವರ್ಣ ಪೂಜಾ ಮಂಟಪ ಸಮರ್ಪಣಾ ಧಾರ್ಮಿಕ ಕಾರ್ಯಕ್ರಮದಲ್ಲಿ ಮಾತನಾಡಿ, ಧರ್ಮವು ಮನುಷ್ಯನಲ್ಲಿ ಸನ್ಮಾರ್ಗದ ಗುಣಗಳನ್ನು ಬೆಳೆಸಿದೆ ಎಂದು ಹೇಳಿದರು.

ಜಗತ್ತಿನಲ್ಲಿ ದೇವರ ಅನುಗ್ರಹವಿಲ್ಲದೆ ಏನು ನಡೆಯಲು ಸಾಧ್ಯವಿಲ್ಲ. ಜಗತ್ತಿನಲ್ಲಿ ವಿಜ್ಞಾನ ಬೆಳೆದಂತೆ ಮನುಷ್ಯನ ಮನಸ್ಥಿತಿಯು ಬದಲಾಗುತ್ತಿದೆ. ತಾನು ನಡೆದು ಬಂದ ಪರಂಪರೆಯನ್ನು ಮರೆಯುತ್ತಿರುವ ಪರಿಣಾಮದಿಂದಲೇ ಪ್ರಕೃತಿಯಲ್ಲಿ ಹಲವು ಬದಲಾವಣೆಗಳಾಗಿ ಅವಘಡಗಳು ಹೆಚ್ಚಾಗಲು ಕಾರಣವಾಗಿದೆ ಎಂದರು.

ಶಾಸಕ ಸಿ.ಎನ್. ಬಾಲಕೃಷ್ಣ ಮಾತನಾಡಿ, ನವಿಲೆ ನಾಗೇಶ್ವರ ಕ್ಷೇತ್ರದಲ್ಲಿ ಬರುವ ಭಕ್ತರ ಅನುಕೂಲಕ್ಕಾಗಿ ಪ್ರಮುಖ ನಾಲ್ಕು ರಸ್ತೆಗಳ ಅಭಿವೃದ್ಧಿಗೂ ಆದ್ಯತೆ ನೀಡಲಾಗಿದೆ. ಬಸ್ ವ್ಯವಸ್ಥೆ ಮತ್ತು ಪ್ರತಿನಿತ್ಯ ಅನ್ನ ದಾಸೋಹವನ್ನು ನಡೆಸಲಾಗುತ್ತಿದೆ. ನೂತನ ಕಲ್ಯಾಣ ಮಂಟಪವನ್ನು ಸುಮಾರು 5 ಕೋಟಿ ವೆಚ್ಚದಲ್ಲಿ ನಿರ್ಮಾಣ ಮಾಡಲಾಗುತ್ತಿದ್ದು ಲೋಕಾರ್ಪಣೆಯನ್ನು ಪರಮಪೂಜ್ಯ ರಂಭಾಪುರಿ ಜಗದ್ಗುರುಗಳಿಂದ ನೆರವೇರಿಸಲಾಗುತ್ತದೆ ಎಂದು ಹೇಳಿದರು.

ಗೌರಿಗದ್ದೆ-ಚಿಕ್ಕಮಗಳೂರು ಅವಧೂತ ಆಶ್ರಮದ ವಿನಯ್ ಗುರೂಜಿ ಮಾತನಾಡಿ, ದೇವರನ್ನು ಪರಿಪೂರ್ಣವಾಗಿ ಭಕ್ತಿಯಿಂದ ಪೂಜಿಸಿದರೆ ಮಾತ್ರ ಅವನಲ್ಲಿ ಏನಾದರೂ ನಿರೀಕ್ಷಿಸಲು ಸಾಧ್ಯ. ನವಿಲೆ ನಾಗೇಶ್ವರ ಕ್ಷೇತ್ರಕ್ಕೆ ಹೆಚ್ಚು ಶಕ್ತಿ ಇದ್ದು ನಂಜನಗೂಡಿನ ನಂಜುಂಡೇಶ್ವರ ದೇವಾಲಯಕ್ಕೂ ನವಿಲೆ ನಾಗೇಶ್ವರ ದೇವಾಲಯಕ್ಕೂ ಧಾರ್ಮಿಕವಾಗಿ ಇತಿಹಾಸವಿದೆ ಎಂದರು.

ನೊಣವಿನಕೆರೆ ಕಾಡುಸಿದ್ದೇಶ್ವರ ಮಠದ ಡಾ.ಕರಿವೃಷಭ ದೇಶಿಕೇಂದ್ರ ಶಿವಯೋಗೀಶ್ವರ ಸ್ವಾಮೀಜಿ ಮಾತನಾಡಿ, ಬಾಳೆಹೊನ್ನೂರು ರಂಭಾಪುರಿ ಮಠಕ್ಕೆ ಸಾವಿರಾರು ವರ್ಷಗಳ ಇತಿಹಾಸವಿದ್ದು ಶ್ರೀ ಮಠದ ಪೀಠಾಧ್ಯಕ್ಷರ ಧರ್ಮ ಜಾಗೃತಿ ಕಾರ್ಯಕ್ರಮಗಳು ಜನರಲ್ಲಿ ಭಕ್ತಿ ಭಾವನೆಯನ್ನು ಹೆಚ್ಚಿಸುವ ಕೆಲಸವನ್ನು ಮಾಡುತ್ತಿವೆ. ಎಂದು ಹೇಳಿದರು.

ಶ್ರೀ ಕಾಡು ಸಿದ್ದೇಶ್ವರ ಹಾಗೂ ಬಸವಣ್ಣನವರ ದೇವತೆಗಳು ಶಿಥಿಲಗೊಂಡಿದ್ದು ದೇವಾಲಯಗಳ ಪುನರ್ ಪ್ರತಿಷ್ಠಾಪನೆ ಕೆಲಸವನ್ನು ಸಮಾಜದ ಎಲ್ಲರ ಸಹಕಾರದೊಂದಿಗೆ ನೆರವೇರಿಸಲಾಗುತ್ತದೆ. ಕ್ಷೇತ್ರದ ಶಾಸಕರು ದೇವಾಲಯಗಳ ನಿರ್ಮಾಣಕ್ಕೆ ಹೆಚ್ಚಿನ ಸಹಕಾರ ಕೊಡುವುದಾಗಿ ಭರವಸೆ ನೀಡಿದ್ದು ಸದ್ಯದಲ್ಲೇ ದೇವಾಲಯ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಲಾಗುತ್ತದೆ ಎಂದರು.

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ನವಿಲೆ ಪರಮೇಶ್ ಮಾತನಾಡಿ, ಮಾಜಿ ವಿಧಾನ ಪರಿಷತ್ ಸದಸ್ಯ ಗೋಪಾಲಸ್ವಾಮಿ, ನುಗ್ಗೇಹಳ್ಳಿ ಪುರ ವರ್ಗ ಹಿರೇಮಠ ಡಾ. ಮಹೇಶ್ವರ ಸ್ವಾಮೀಜಿ, ಬಾಳೆಹೊನ್ನೂರು ಶಾಖಾಮಠದ ಸ್ವಾಮೀಜಿ ರೇವಣ್ಣ ಸಿದ್ದೇಶ್ವರ ಶಿವಾಚಾರ್ಯ ಸ್ವಾಮೀಜಿ, ಸದಾಶಿವ ಶಿವಾಚಾರ್ಯ ಸ್ವಾಮೀಜಿ, ಮುಜರಾಯಿ ತಹಶೀಲ್ದಾರ್ ಎಚ್.ಎಮ್.ಲತಾ, ಶಿವಾನುಗ್ರಹ ಪ್ರತಿಷ್ಠಾನದ ಅಧ್ಯಕ್ಷ ಸಿದ್ದೇಶ್ ಶಾಸ್ತ್ರಿ, ಸದಸ್ಯರಾದ ಪವನ್ ಕುಮಾರ್, ಸಂದೀಪ್, ಚನ್ನರಾಯಪಟ್ಟಣ ನಗರ ಅಧಿಕಾರದ ಮಾಜಿ ಅಧ್ಯಕ್ಷ ಎ.ಸಿ.ಆನಂದ್ ಕುಮಾರ್, ಉದ್ಯಮಿ ಭುವನಹಳ್ಳಿ ಯೋಗೇಶ್, ತಾಲೂಕು ಟಿಎಪಿಎಂಎಸ್ ಅಧ್ಯಕ್ಷ ಮರಗೂರು ಅನಿಲ್, ಸಾಹಿತಿ ಗುರುಪಾದಯ್ಯ ಸಾಲಿಮಠ, ಪ್ರಾಧ್ಯಾಪಕಿ ಮಮತಾ ಸಾಲಿಮಠ, ನವಿಲೆ ಕೃಷಿ ಪತ್ತಿನ ಅಧ್ಯಕ್ಷ ಕುಮಾರಸ್ವಾಮಿ, ಶಿವಾನುಗ್ರಹ ಸೇವಾ ಪ್ರತಿಷ್ಠಾನದ ಸರ್ವ ಸದಸ್ಯರು ನವಿಲೆ ಸುತ್ತಮುತ್ತಲಿನ ಗ್ರಾಮಸ್ಥರು ಭಕ್ತರು ಹಾಜರಿದ್ದರು.

# ಇತಿಹಾಸದಲ್ಲಿ ಈ ದಿನ

## ಜುಲೈ-15

**1857:** ಸಿಪಾಯಿಗಳ ಬ್ರಿಟಿಷ್ ಈಸ್ಟ್ ಇಂಡಿಯಾ ಕಂಪನಿಗೆ ವಿರುದ್ಧವಾಗಿ ನಡೆದ ಮೊದಲ ಸ್ವಾತಂತ್ರ್ಯ ಹೋರಾಟದ ಸಂದರ್ಭ. ಗವರ್ನರ್ ಜನರಲ್ ಲಾರ್ಡ್ ಕ್ಯಾನಿಂಗ್ ಅವರು ಬ್ರಿಟಿಷ್ ಕಮಿಷನ್ ನೇಮಿಸಿದರು.

**1948:** ಭಾರತೀಯ ಸುದ್ದಿ ಸಂಸ್ಥೆ ಟಿಪ್ರೆಸ್ ಟ್ರಸ್ಟ್ ಆಫ್ ಇಂಡಿಯಾಟಿ ಸ್ಥಾಪನೆಯಾಯಿತು. ಇಂದು ಇದು ಭಾರತದ ಪ್ರಮುಖ ಸುದ್ದಿ ಏಜೆನ್ಸಿಗಳಲ್ಲಿ ಒಂದಾಗಿದೆ.

**1997:** ಮಿಸುಬೈಶಿ ಪ್ಲ್ಯಾಂಟ್‌ಗೆ ಭಾರತದಲ್ಲಿ ಅನುಮತಿ. ಜಪಾನಿನ ಮಿಸುಬೈಶಿ ಕಂಪನಿಗೆ ತಮಿಳುನಾಡಿನಲ್ಲಿ ಕೈಗಾರಿಕಾ ಘಟಕ ಸ್ಥಾಪಿಸಲು ಅನುಮತಿ ನೀಡಲಾಯಿತು.

**1799:** ಮಿಸರ್‌ನ ರೋಸೆಟ್ಟಾ ಪಟ್ಟಣದಲ್ಲಿ ನಪೋಲಿಯನ್‌ನ ಸೇನೆ ಖನನದ ಸಂದರ್ಭದಲ್ಲಿ ರೋಸೆಟ್ಟಾ ಸ್ಟೋನ್ ಪತ್ತೆಯಾಯಿತು.

**1916:** ವಿಶ್ವದ ಅತಿದೊಡ್ಡ ವಿಮಾನ ತಯಾರಿಕಾ ಕಂಪನಿಗಳಲ್ಲಿ ಒಂದಾದ ಬೋಯಿಂಗ್ ಕಂಪನಿ ಸಿಯಾಟ್‌ನಲ್ಲಿ ಸ್ಥಾಪನೆಯಾಯಿತು.

**1975:** ಅಪೋಲೋ-ಸಾಯುಜ್ ಮಿಷನ್. ಅಮೆರಿಕದ ನಾಸಾ ಮತ್ತು ರಷ್ಯಾದ ಸೋವಿಯತ್ ಸ್ಪೇಸ್ ಪ್ರೋಗ್ರಾಂ ಮೊದಲ ಬಾರಿಗೆ ಸಂಯುಕ್ತ ಅಂತಾರಾಷ್ಟ್ರೀಯ ಬಾಹ್ಯಾಕಾಶ ಮಿಷನ್ ನಡೆಸಿದ ದಿನ.

ಜನನ

**1606:** ರೆಂಬ್ರಾಂಡ್. ಡಚ್ ಕಲಾವಿದ, ಇತಿಹಾಸದ ಪ್ರಮುಖ ಚಿತ್ರಕಾರರಲ್ಲೊಬ್ಬ.

**1903:** ಇರಾದಾಲಿ ಖಾನ್. ಸ್ವಾತಂತ್ರ್ಯ ಹೋರಾಟಗಾರ ಮತ್ತು ಖಿಲಾಫತ್ ಚಳವಳಿಯ ನಾಯಕ.

ಮರಣ

**1927:** ಸ್ವಾಮಿ ಶ್ರದ್ಧಾನಂದ. ಭಾರತೀಯ ಚಿಂತಕ ಮತ್ತು ಸ್ವಾತಂತ್ರ್ಯ ಹೋರಾಟಗಾರ.

# ಕರಾಟೆ ಬೆಲ್ಟ್ ಪರೀಕ್ಷೆ ಪ್ರಮಾಣ ಪತ್ರ ವಿತರಣೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲಾ ಅಮೆಚೂರ್ ಬಾಡಿ ಬಿಲ್ಡರ್ ಸಂಸ್ಥೆ, ನ್ಯಾಷನಲ್ ಟೆಕ್ಸ್‌ಟೈಲ್ ಕಾರ್ಪೋರೇಷನ್, ಇಂಡಿಯನ್ ಕೌನ್ಸಿಲ್ ಫಾರ್ ಸ್ಪೋರ್ಟ್ಸ್ ಅಂಡ್ ಎಜುಕೇಷನ್, ಸ್ಪೋರ್ಟ್ಸ್ ಅಥಾರಿಟಿ ಆಫ್ ಆರ್ಗನೈಜೇಷನ್ ವತಿಯಿಂದ ನಗರದ ಗುರು ಭವನದಲ್ಲಿ ಭಾನುವಾರ ಕರಾಟೆ ಬೆಲ್ಟ್ ಪರೀಕ್ಷೆ ನಡೆಯಿತು. ವಿಜೇತರಿಗೆ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅವರ ಆಪ್ತ ಸಹಾಯಕ ಸುಬ್ರಹ್ಮಣ್ಯ ಪ್ರಶಸ್ತಿ ಪತ್ರ ವಿತರಿಸಿದರು. 120 ಕರಾಟೆ ಪಟುಗಳು ಭಾಗವಹಿಸಿದ್ದರು. ಕರಾಟೆ ತರಬೇತುದಾರರಾದ ಮಹಾದೇವ, ನವೀನ್, ಮಹೇಂದ್ರ, ಮನೋಜ್, ಸೌಜನ್ಯ ಪರೀಕ್ಷೆ ನಡೆಸಿದರು.

ಜಿಲ್ಲಾ ಅಮೆಚೂರ್ ಬಾಡಿ ಬಿಲ್ಡರ್ ಸಂಸ್ಥೆಯ ಖಜಾಂಚಿ ಕೈಲಾಸ್ ಶಂಕರ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ರಾಜ್ಯ ಬಾಡಿ ಬಿಲ್ಡರ್ ಸಂಸ್ಥೆ ಉಪಾಧ್ಯಕ್ಷ ಮೋಹನ್ ಕುಮಾರ್, ಜಿಲ್ಲಾ ಯೋಗ ಸಂಸ್ಥೆಯ ಉಪಾಧ್ಯಕ್ಷೆ ಭಾನುಮತಿ, ಸರ್ಕಾರಿ ಪ್ರಾಥಮಿಕ ಶಿಕ್ಷಕರ ಸಂಘದ ಅಧ್ಯಕ್ಷ ಅಣ್ಣಪ್ಪ, ಕ್ರೀಡಾ ಪರಿಷತ್ ಕಾರ್ಯದರ್ಶಿ ನಿರಂಜನ ರಾಜ್ ಮತ್ತಿತರರಿದ್ದರು.

# ಎದೆಯ ಹಣತೆ ಎಲ್ಲರೂ ಓದಬೇಕಾದ ಕೃತಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹೊಳೆನರಸೀಪುರ: ನಮ್ಮ ಜಿಲ್ಲೆಯ ಹೆಮ್ಮೆಯ ಬರಹಗಾರ್ತಿ ಬೂಕರ್ ಪ್ರಶಸ್ತಿ ವಿಜೇತೆ ಬಾನು ಮುಷ್ತಾಕ್ ರಚನೆಯ ಎದೆಯ ಹಣತೆ ಪುಸ್ತಕವನ್ನು ತಪ್ಪದೆ ಓದುವಂತೆ ಸಂಸದ ಶ್ರೇಯಸ್ ಪಟೇಲ್ ಸಲಹೆ ನೀಡಿದರು.

ಪಟ್ಟಣದ ಸಮುದಾಯ ಭವನ ಗಣಪತಿ ಪೆಂಡಾಲ್‌ನಲ್ಲಿ ವಿವಿಧ ಸಂಘ ಸಂಸ್ಥೆಗಳು ಆಯೋಜಿಸಿದ್ದ ಎದೆಯ ಹಣತೆ ಮತ್ತು ಮಾಯಾಮೃಗ ನಾಟಕ ಪ್ರದರ್ಶನ ಉದ್ಘಾಟಿಸಿ ಮಾತನಾಡಿದ ಅವರು, ಈ ಕೃತಿಯಲ್ಲಿರುವ ನೈಜತೆಯನ್ನು ಜನರಿಗೆ ತೋರಿಸಲು ಶಿವಮೊಗ್ಗ ಜಿಲ್ಲೆ ಹೆಗ್ಗೋಡಿನ ನಿನಾಸಂ ಕಲಾ ಬಳಗ ನಾಟಕ ರೂಪದಲ್ಲಿ ತಂದಿದೆ. ಈ ನಾಟಕ ಕರ್ನಾಟಕ ರಾಜ್ಯಾದ್ಯಂತ ಪ್ರದರ್ಶನ ಆದರೆ ಅನೇಕರ ಕಣ್ಣು ತೆರೆಸುತ್ತದೆ. ರಾಜ್ಯದ ಎಲ್ಲಾ ಗ್ರಂಥಾಲಯಗಳಲ್ಲಿ ಈ ಪುಸ್ತಕ ಇರಬೇಕು ಎಂದರು.

ಡಿವೈಎಸ್‌ಪಿ ಶಾಲು ಅವರು ಮಾತನಾಡಿ, ನಾಟಕಗಳು, ಪುಸ್ತಕಗಳು ಅತ್ಯತ್ತುಮ ಮಾರ್ಗದರ್ಶನ ನೀಡುತ್ತದೆ. ಜನರು ಹೆಚ್ಚು ಇಂತಹ ಪುಸ್ತಕಗಳನ್ನು ಓದಿ ಬರಹಗಾರರನ್ನು ಪ್ರೋತ್ಸಾ ಹಿಸಿ ಎಂದು ವಿನಂತಿಸಿದರು.

ರಾಜ್ಯ ದಂಡೋರ ಸಮಿತಿ ಸಂಚಾಲಯಕ ವಿಜಯಕುಮಾರ್, ಪುರಸಭಾಧ್ಯಕ್ಷ ಪ್ರಸನ್ನ, ದಲಿತ ಸಂಘರ್ಷ ಸಮಿತಿ ರಾಜ್ಯ ಸಂಚಾಲಕ ಎಂ.ಸೋಮಶೇಖರ್, ಸರ್ಕಲ್ ಇನ್ಸ್‌ಪೆಕ್ಟರ್ ಪ್ರದೀಪ್, ನಿನಾಸಂನ ಪ್ರಾಂಶುಪಾಲ ಡಾ.ಎಂ. ಗಣೇಶ್, ಸುರೇಶ್‌ಕುಮಾರ್ ಮಾತನಾಡಿದರು. ಡಾ. ವೆಂಕಟೇಶ್ ಮೂರ್ತಿ, ವಕೀಲ ಹರೀಶ್, ತಾಲ್ಲೂಕು ಕಸಾಪ ಅಧ್ಯಕ್ಷ ಆರ್.ಬಿ. ಪುಟ್ಟೇಗೌಡ, ಕೃಷ್ಣಮೂರ್ತಿ, ಚಿನ್ನಸ್ವಾಮಿ, ನಾಗೇಂದ್ರ, ದಂಡೋರ ನಾಗರಾಜ್, ವಕೀಲ ಮಂಜುನಾಥ್ ಉಪಸ್ಥಿತರಿದ್ದರು.

# ಕಾಫಿ ಬಳಕೆ ಉತ್ತೇಜನಕ್ಕೆ ವುಮೆನ್ ಕೌನ್ಸಿಲ್ ಅಸ್ತಿತ್ವಕ್ಕೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಸಕಲೇಶಪುರ: ಕಾಫಿಯ ಆಂತರಿಕ ಬಳಕೆಯನ್ನು ಉತ್ತೇಜಿಸುವ ಗುರಿಯನ್ನು ಹೊಂದಿರುವ ವುಮೆನ್ ಕಾಫಿ ಪ್ರೊಮೋಷನ್ ಕೌನ್ಸಿಲ್ ಆಸಕ್ತ ಹಾಗೂ ಸಮಾನ ಮನಸ್ಕ ಮಹಿಳಾ ಕಾಫಿ ಬೆಳೆಗಾರರಿಂದ ಸ್ಥಾಪಿತವಾದ ಸಂಸ್ಥೆಯಾಗಿದೆ ಎಂದು ಸಂಸ್ಥೆಯ ಸ್ಥಾಪಕ ಅಧ್ಯಕ್ಷೆ ಆಶಾ ಶಶಿಧರ್ ತಿಳಿಸಿದರು.

ಪಟ್ಟಣದ ಹೆಚ್‌ಡಿಪಿಎ ಆವರಣದಲ್ಲಿ ನಡೆದ 2024-25ನೇ ಸಾಲಿನ ವಾರ್ಷಿಕ ಮಹಾಸಭೆಯಲ್ಲಿ ಮಾತನಾಡಿದ ಅವರು, ಯುವಜನತೆ ಉತ್ಸಾಹದಿಂದ ಸಂಸ್ಥೆಯ ಕಾರ್ಯಚಟುವಟಿಕೆಯಲ್ಲಿ ಪಾಲ್ಗೊಳ್ಳುತ್ತಿರುವುದು ಸಂತೋಷದಾಯಕವಾಗಿದೆ. ಪ್ರತಿ ಸದಸ್ಯರ ಸಹಕಾರವೇ ಸಂಸ್ಥೆಯ ಯಶಸ್ಸಿಗೆ ಬೆನ್ನೆಲುಬಾಗಿದೆ ಎಂದು ಹೇಳಿದರು.

ಮಾಜಿ ಅಧ್ಯಕ್ಷೆ ಚಂದ್ರಕಲಾ ಕಾಂತರಾಜ್ ಮಾತನಾಡಿ, ಸಂಸ್ಥೆಯ ರಜತ ಮಹೋತ್ಸವ ಕುರಿತು ಉಲ್ಲೇಖಿಸಿ, ಭವಿಷ್ಯದ ಕಾರ್ಯಕ್ರಮಗಳಿಗೆ ಮುಂದಾಲೋಚನೆಯಿಂದ ರೂಪುರೇಷೆ ತಯಾರಿಸಬೇಕೆಂದು ಸಲಹೆ ನೀಡಿದರು.

ಸಾಗರಿಕಾ ಲಕ್ಷಣ್ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಮುಂದಿನ ಅವಧಿಯ ಪದಾಧಿಕಾರಿಗಳ ಆಯ್ಕೆ ನಡೆಯಿತು. ನೂತನ ಅಧ್ಯಕ್ಷೆಯಾಗಿ ಜಯಶ್ರೀ ವಿಶ್ವೇಶರ್, ಉಪಾಧ್ಯಕ್ಷೆಯಾಗಿ ನಂದಿತಾ ಧರ್ಮರಾಜ್, ಕಾರ್ಯದರ್ಶಿ- ನಂದಾ ರಾಜ್ ಶೇಖರ್, ಖಜಾಂಚಿ ಶ್ರುತಿ ರಂಜನ್, ಸಾರ್ವಜನಿಕ ಸಂಪರ್ಕ ಪ್ರತಿನಿಧಿ ಕಾವ್ಯ ಸೂರಜ್, ಸಹ ಕಾರ್ಯದರ್ಶಿ ಕೃತಿ ಪ್ರಜ್ವಲ್, ಸಹ ಖಜಾಂಚಿ ಸುಪ್ರಿಯಾ ರತ್ನ ಆಯ್ಕೆಯಾದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248